ಔಷಧಿಗಳ ಸರಬರಾಜು

445(956); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಯ ತಾಲ್ಲೂಕು ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಳೆದ 6 ತಿಂಗಳಿಂದ ಜೀವನಾಂಶಕ ಔಷಧಿಗಳಾದ ಇನ್ಸುಲಿನ್ ಹಾಗೂ ಇನ್ನಿತರೇ ಔಷಧಿಗಳು ಪೂರೈಕೆ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕಳೆದ 6 ತಿಂಗಳಿಂದ ಜೀವನಾಂಶಕ ಔಷಧಿಗಳು ಪೂರೈಕೆಯಾಗದೇ ಬಡ ರೋಗಿಗಳು ತೊಂದರೆ ಅನುಭವಿಸುತ್ತಿರುವುದು ನಿಜವಲ್ಲವೇ; ಇದಕ್ಕೆ ಕಾರಣವೇನು;

ಇ) ಸರ್ಕಾರ ಈಗಾಲಾದರೂ ಜೀವನಾಂಶಕ ಔಷಧಿಗಳನ್ನು ಪೂರೈಸಲು ಕ್ರಮ ಕೈಗೊಳ್ಳುವುದೇ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇನ್ಸುಲಿನ್ ಹಾಗೂ ಇನ್ನಿತರೆಔಷಧಿಗೆ ಸಂಬಂಧಿಸಿದಂತೆ, ಬೀದರ್ ಜಿಲ್ಲೆಯ ತಾಲ್ಲೂಕು ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಸಂಸ್ಥೆಗಳಿಂದ ಬಂದಂತಹ ಬೇಡಿಕೆಗನುಗುಣವಾಗಿ ಈಗಾಗಲೇ ಇನ್ಸುಲಿನ್ ಔಷಧಿಯನ್ನು ಸರಬರಾಜು ಮಾಡಲಾಗಿದೆ. ಹೆಚ್ಚುವರಿ ಬೇಡಿಕೆ ಬಂದಲ್ಲಿ, ಔಷಧಿಗಳನ್ನು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಆ) ಇನ್ಸುಲಿನ್ ಹಾಗೂ ಇನ್ನಿತರ ಔಷಧಿಗೆ ಸಂಬಂಧಿಸಿದಂತೆ ಬೀದರ್ ಜಿಲ್ಲೆಯ ತಾಲ್ಲೂಕುಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಸಂಸ್ಥೆಗಳಿಂದ ಬಂದಂತಹ ಬೇಡಿಕೆಗನುಗುಣವಾಗಿ ಈಗಾಗಲೇ ಇನ್ಸುಲಿನ್ ಔಷಧಿಯನ್ನು ಸರಬರಾಜು ಮಾಡಲಾಗಿದೆ. ಹೆಚ್ಚುವರಿ ಬೇಡಿಕೆ ಬಂದಲ್ಲಿ, ಔಷಧಿಗಳನ್ನು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಇ) ಹೆಚ್ಚುವರಿ ಬೇಡಿಕೆ ಬಂದಲ್ಲಿ, ಔಷಧಿಗಳನ್ನು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಬಾಲಕ–ಬಾಲಕಿಯರ ವಸತಿ ನಿಲಯಗಳು

446(957); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

1) ಬೀದರ್ ಜಿಲ್ಲೆಯಲ್ಲಿ ಬಾಲಕ ಮತ್ತು ಬಾಲಕಿ ಹಾಗೂ ವೃತ್ತಿಪರ ವಿಷಯಗಳಲ್ಲಿ ಅಭ್ಯಾಸ ಮಾಡುವ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗಾಗಿ ಇಲಾಖಾ ವತಿಯಿಂದ ಎಷ್ಟು ವಿದ್ಯಾರ್ಥಿ ವಸತಿ ನಿಲಯಗಳಿವೆ;

2) ಈ ವಸತಿ ನಿಲಯಗಳಲ್ಲಿ ಮಂಜೂರಾದ ಮಕ್ಕಳ ಸಂಖ್ಯೆ ಎಷ್ಟು; ಈ ಸಾಲಿನಲ್ಲಿ ಎಷ್ಟು ಮಕ್ಕಳಿಗೆ ಪ್ರವೇಶ ನೀಡಲಾಗಿದೆ;

3) ಪ್ರಸ್ತುತ ಈ ವಸತಿ ನಿಲಯಗಳು ಎಷ್ಟು ಸ್ವಂತ ಕಟ್ಟಡಗಳನ್ನು ಹೊಂದಿವೆ; ಎಷ್ಟು ಬಾಡಿಗೆ ಕಟ್ಟಡಗಳಲ್ಲಿವೆ (ವಿವರ ನೀಡುವುದು)?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

1) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬೀದರ್ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯ 45 ಬಾಲಕರ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದ್ದು, ಈ ಪೈಕಿ 01 ವೃತ್ತಿಪರ ಬಾಲಕರ ವಿದ್ಯಾರ್ಥಿ ನಿಲಯವಿರುತ್ತದೆ ಹಾಗೂ 14 ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದ್ದು, ಈ ಪೈಕಿ 01 ವೃತ್ತಿಪರ ಬಾಲಕಿಯರ ವಿದ್ಯಾರ್ಥಿ ನಿಲಯವಿರುತ್ತದೆ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಬೀದರ್ ಜಿಲ್ಲೆಯಲ್ಲಿ 04 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಅದರಲ್ಲಿ 03 ಬಾಲಕರ ಮತ್ತು 01 ಬಾಲಕೀಯರ ವಿದ್ಯಾರ್ಥಿನಿಲಯವಿರುತ್ತದೆ.